**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 1087/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | | **ವೆಂಕಟೇಶ** | ಪ್ರಾಸಾಃ 1 |
| ತಂದೆಯ/ಗಂಡನ ಹೆಸರು | | ಲೇಟ್ ತಿಮ್ಮಯ್ಯ | ಚಾಸಾಃ 1 |
| ವಯಸ್ಸು | | 52 ವರ್ಷ | |
| ಕೆಲಸ | | ಕೂಲಿ | ಸಾ ಪ್ರ ಬೋ |
| ವಾಸ | | ಬಸ್ತಿಪುರ ಗ್ರಾಮ | ದಿಃ 28/05/2024 |

**ಮುಖ್ಯ ವಿಚಾರಣೆ ಪ್ರಾಜ್ಞ ಸ.ಸ.ಅ ರವರಿಂದಃ**

ಮೃತ ಪ್ರವೀಣ್ ಕುವಾರ್ ನನ್ನ ಮಗ. ಆತ ಅಪಘಾತದಲ್ಲಿ ಮೃತಪಟ್ಟಿರುತ್ತಾರೆ. ಅಪಘಾತವು ಎಲ್ಲಿ, ಹೇಗೆ ಮತ್ತು ಯಾರ ತಪ್ಪಿನಿಂದ ಜರುಗಿದೆ ನನಗೆ ಗೊತ್ತಿಲ್ಲ. ಯಾವ ಯಾವ ವಾಹನಗಳ ನಡುವೆ ಅಪಘಾತವಾಗಿದೆ ನನಗೆ ಗೊತ್ತಿಲ್ಲ. ಆರೋಪಿ ನನಗೆ ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲಾತಿ ತೋರಿಸಿದ್ದು ಅದು ದೂರಾಗಿದ್ದು, ದೂರಿನಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ದೂರನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಮತ್ತೊಂದು ದಾಖಲಾತಿ ತೋರಿಸಿದ್ದು ಅದು ಸ್ಥಳ ಪಂಚನಾಮೆ ಯಾಗಿದ್ದು, ಸ್ಥಳ ಪಂಚನಾಮೆ ಯಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ಸ್ಥಳ ಪಂಚನಾಮೆ ಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನಿಪಿ-1 ಮತ್ತು 2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಾಹನಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಪ್ರಾಜ್ಞ ಸ.ಸ.ಅ ರವರಿಂದಃ**

ದಿಃ08.05.2018 ರಂದು ಬೆಳಿಗ್ಗೆ 11.30 ಗಂಟೆ ಸುಮಾರಿಗೆ ಹೊಸಕೋಟೆ ಗ್ರಾಮದ ಶಂಕರ್ ಎನ್ನುವರ ಜಮೀನಿನ ಬಳಿಯ ಸುತ್ತೂರು-ಮೈಸೂರು ಮುಖ್ಯ ರಸ್ತೆಯಲ್ಲಿ ಆರೋಪಿಯು ಕೆಎ-10-ಎ-3679 ಖಾಸಗಿ ಬಸ್ಸನ್ನು ಅತಿ ವೇಗ ಮತ್ತು ಅಜಾಗುರಕತೆಯಿಂದ ಚಾಲನೆ ಮಾಡಿಕೊಂಡು ಬಂದು ನನ್ನ ಮಗ ಪ್ರವೀಣ್ ಕುಮಾರ್ ಮೈಸೂರು ಕಡೆಯಿಂದ ಸುತ್ತೂರು ಕಡೆಗೆ ಕೆಎ-11-ವಿ-7239 ಹಿರೋ ಸ್ಲೆಂಡರ್ ಬೈಕನಲ್ಲಿ ಬರುವಾಗ ಡಿಕ್ಕಿ ಹೊಡೆಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಈ ಎಲ್ಲಾ ವಿಚಾರಗಳನ್ನು ಒಳಗೊಂಡಂತೆ ದಿನಾಂಕ 08.05.2018 ರಂದು ಪೊಲೀಸರಿಗೆ ಈಗ ನನಗೆ ಓದಿ ಹೇಳಿದಂತೆ " ದಿನಾಂಕ 08.05.2018- - - - - ಕ್ರಮ ಜರುಗಿಸಬೇಕಾಗಿ ಕೋರಿಕೆ" ಎಂದು ನಿಪಿ-1 ರಂತೆ ದೂರು ನೀಡಿದ್ದೇನೆ ಎಂದರೆ ಸರಿಯಲ್ಲ. ಇದೇ ವಿಚಾರವಾಗಿ ದಿನಾಂಕ 08.05.2018 ರಂದು ನಾನು ಅಪಘಾತ ನಡೆದ ಸ್ಥಳವನ್ನು ಪೊಲೀಸರಿಗೆ ತೋರಿಸಿದ ಮೇರೆಗೆ ಅವರುಗಳು ಚಾಸಾ-9 ಮತ್ತು 10 ರವರ ಸಮಕ್ಷಮ ಮಧ್ಯಾಹ್ನ 1.15 ರಿಂದ 1.45 ರವರೆಗೆ ನಿಪಿ-2 ರಂತೆ ಪಂಚನಾಮೆ ಜರುಗಿಸಿ ಅಪಘಾತ ಪಡಿಸಿದ್ದ ಖಾಸಗಿ ಬಸ್ಸ್ ಮತ್ತು ಅಪಘಾತಕ್ಕೆ ಇಡಾದ ಮೋಟಾರು ಸೈಕಲನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಇದೇ ವಿಚಾರವಾಗಿ ದಿನಾಂಕ 09.05.2018 ರಂದು ಈಗ ನನಗೆ ಓದಿ ಹೇಳಿದಂತೆ " ದಿನಾಂಕ 08.05.20188 ರಂದು -------- ಮತ್ತೇ ನೋಡಿದರೆ ಗುರುತಿಸುತ್ತೇನೆ" ಎಂದು ಪೊಲೀಸರ ಮುಂದೆ ಮರುಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಮರುಹೇಳಿಕೆಯ ಭಾಗವನ್ನು ನಿಪಿ-3 ಎಂದು ಗುರುತಿಸಲಾಯಿತು. ಈ ಮೇಲಿನ ಎಲ್ಲಾ ವಿಚಾರಗಳು ಗೊತ್ತಿದ್ದರೂ ಕೂಡ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**